**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ ದ ನ್ಯಾದಂ. ರವರ ನ್ಯಾಯಾಲಯ, ಪಿರಿಯಾಪಟ್ಟಣ.**

**ಸಿ.ಸಿ. ಸಂಃ 839/2019**

| | | |
|---|---|---|
| ಸಾಕ್ಷಿಯ ಹೆಸರುಃ | ಶಿವಪ್ಪ | ಫ್ರಾಸಾಃಃ 3 |
| ತಂದೆ ಹೆಸರುಃ | ದೊಡ್ಡಬೊಮ್ಮಯ್ಯ | ಚಾಸಾಃಃ 3 |
| ವಯಸ್ಸುಃ | 65 ವರ್ಷ | ಪ್ರಮಾಣೀಕರಿಸಿದ<br>ದಿಃ 08/07/2025 |
| ಉದ್ಯೋಗಃ | ವ್ಯವಸಾಯ | |
| ವಾಸ ಸ್ಥಳಃ | ಪಾಕನಾಳಕೊಪ್ಪಲು ಗ್ರಾಮ,<br>ಪಿರಿಯಾಪಟ್ಟಣ ತಾ. | |

**ಮುಖ್ಯ ವಿಚಾರಣೆಃ ಮಾನ್ಯ ಸಸಅ ರಿಂದಃ**

ನನಗೆ ಆರೋಪಿತರು ಗೊತ್ತು. ನನಗೆ ಚಾಸಾ-1 ಮತ್ತು 2 ಗೊತ್ತು. ನನಗೆ ಈ ಪ್ರಕರಣದ ಬಗ್ಗೆ ಏನೂ ಗೊತ್ತಿಲ್ಲ. ಆರೋಪಿತರು ಯಾವತ್ತೂ ಸಹ ಚಾಸಾ-1 ಮತ್ತು 2 ರವರೊಂದಿಗೆ ಜಗಳ ಮಾಡಿಲ್ಲ, ಮುಂದೆ ಹೋಗದಂತೆ ತಡೆಯುಂಟುಮಾಡಿಲ್ಲ, ದೊಣ್ಣೆಯಿಂದ ಮತ್ತು ಕೈಗಳಿಂದ ಹಲ್ಲೆ ಮಾಡಿಲ್ಲ, ಅವಮಾನ ಮಾಡಿಲ್ಲ, ಅವಾಚ್ಯ ಶಬ್ದಗಳಿಂದ ಬೈದಿರುವುದಿಲ್ಲ ಮತ್ತು ಕೊಲೆ ಬೆದರಿಕೆ ಹಾಕಿರುವುದಿಲ್ಲ. ನಾನು ಘಟನೆಯನ್ನು ಪ್ರತ್ಯಕ್ಷವಾಗಿ ನೋಡಿಲ್ಲ. ಸ್ಥಳ ಮಹಜರ್ ಕಾಲಕ್ಕೆ ನಾನು ಹಾಜರಿರಲಿಲ್ಲ ಮತ್ತು ಪೊಲೀಸರು ನನ್ನ ಸಮಕ್ಷಮ ಯಾವುದೇ ವಸ್ತುವನ್ನು ಅಮಾನತ್ತು ಪಡಿಸಿಕೊಂಡಿಲ್ಲ. ಸಾಕ್ಷಿಯು ನಿಪಿ.1-ಸ್ಥಳ ಮಹಜರ್ ನಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿ.ಪಿ.1(ಬಿ)** ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ನಾನು ಖಾಲಿ ಹಾಳೆಯ ಮೇಲೆ ಪೊಲೀಸರ ಒತ್ತಾಯಕ್ಕೆ ಹಾಕಿರುತ್ತೇನೆ.

**(ಈ ಸಮಯದಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರುತ್ತಾರೆ. ಕಡತವನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ ಮಾನ್ಯ ಸಸಅ ರವರಿಂದಃ**

ಈಗ ನನಗೆ ಓದಿ ಹೇಳಿದಂತೆ ''ದಿನಾಂಕಃ04/05/2018 ರಂದು ........................... ಈ ಮಹಜರ್ ನ್ನು ಬೆಳಿಗ್ಗೆ 9.00 ಗಂಟೆಯಿಂದ 10.00 ಗಂಟೆಯವರೆಗೆ ಬರೆಯಲಾಯ್ತು''ಎಂದು ನಿಪಿ.1 ರಂತೆ ಮಹಜರ್ ಕ್ರಮ ಜರುಗಿಸಲಾಯಿತು ಎಂದರೆ ಸರಿಯಲ್ಲ. ಸದರಿ ಮಹಜರ್ ಗೆ ನಾನು ಸ್ಥಳದಲ್ಲಿ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿತರ ಪರ ವಕೀಲರಿಂದಃ** ಇಲ್ಲ.

**ಮರು ವಿಚಾರಣೆಃ** ಇಲ್ಲ.

**ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು**

**ಓದಿ ಹೇಳಿ ಕೇಳಿ ಸರಿ ಇದೆ ಎಂದು ಸಾಕ್ಷಿ ಒಪ್ಪಿಕೊಂಡಿರುತ್ತಾರೆ.**

**ಹೆಃಸಿ.ನ್ಯಾ ಹಾಗೂ ಪ್ರ.ದ.ನ್ಯಾದಂ.,**

**ಪಿರಿಯಾಪಟ್ಟಣ.**